ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ

ಸಂಖ್ಯೆ:ಬೃ.ಬೆಂ.ಮ.ಪಾ/ಕಾ.ಪಾ.ಅ/ಯ.ವಿ/ಆ.ಅ/ 15 /2023-24

ಕಾರ್ಯಪಾಲಕ ಅಭಿಯಂತರವರ ಕಛೇರಿ
ಯಲಹಂಕ ವಿಭಾಗ, ಬೃ.ಬೆಂ.ಮ.ಪಾ.
ಬೆಂಗಳೂರು 64 ದಿನಾಂಕ: 08/12/2023

ಆಡಳಿತಾತ್ಮಕ ಅನುಮೋದನೆ ಟಿಪ್ಪಣಿ

ವಿಷಯ:- "Removal of silt & Repairs and maintenance of footpaths in ward no- 03 Attur."

ಉಲ್ಲೇಖ:-ಮಾನ್ಯ ವಲಯ ಆಯುಕ್ತರು, ಯಲಹಂಕ ಬಿಬಿಎಂಪಿ ರವರು ಕಂಡಿಕೆ(7)ರಲ್ಲಿ ಆಡಳಿತಾತ್ಮಕ ಅನುಮೋದನೆ ನೀಡಿರುತ್ತಾರೆ.

* * * * *

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ, ಸಹಾಯಕ ಕಾರ್ಯಪಾಲಕ ಅಭಿಯಂತರರು (ಯಲಹಂಕ ಉಪನಗರ ಉಪವಿಭಾಗ) ರವರು 2023-24ನೇ ಸಾಲಿನ ಆಯವ್ಯಯದ ಲೆಕ್ಕಶೀರ್ಷಿಕೆ ಪಿ-3726 ರಡಿ ಮಂಜೂರಾಗಿರುವ ಕಾಮಗಾರಿಗಳಿಗೆ 2021-22ನೇ ಸಾಲಿನ ಲೋಕೋಪಯೋಗಿ ಇಲಾಖೆಯ ಎಸ್.ಆರ್. ದರಪಟ್ಟಿಯನ್ವಯ ಮೇಲ್ಕಂಡ ಕಾಮಗಾರಿಗೆ ರೂ.55.00 ಲಕ್ಷಗಳಿಗೆ ಅಂದಾಜುಪಟ್ಟಿ ತಯಾರಿಸಿ ಆಡಳಿತಾತ್ಮಕ ಅನುಮೋದನೆಗಾಗಿ ಮಂಜೂರಾತಿಗಾಗಿ ಸಲ್ಲಿಸಿರುತ್ತಾರೆ.

ಈ ಹಿನ್ನಲೆಯಲ್ಲಿ ಮೇಲ್ಕಂಡ ಕಾಮಗಾರಿಗೆ ಉಲ್ಲೇಖದಂತೆ ಮಾನ್ಯ ವಲಯ ಆಯುಕ್ತರು (ಯಲಹಂಕ) ಬಿಬಿಎಂಪಿ ರವರು ಆಡಳಿತಾತ್ಮಕ ಅನುಮೋದನೆ ನೀಡಿರುತ್ತಾರೆ. ಅದರಂತೆ ಸದರಿ ಕಾಮಗಾರಿಗೆ ಮಾನ್ಯ ಆಯುಕ್ತರವರು ಅಧಿಕಾರ ಪ್ರತ್ಯಾಯೋಜಿಸಿ ಹೊರಡಿಸಿರುವ ಆದೇಶ ಸಂಖ್ಯೆ:ಬಿ12(1)ಪಿ.ಆರ್/394/2023-24 ದಿನಾಂಕ:06-12-2023ರಂತೆ ನೀಡಿರುವ ಅಧಿಕಾರದನ್ವಯ ಈ ಕೆಳಕಂಡ ಷರತ್ತುಗಳಂತೆ ಆಡಳಿತಾತ್ಮಕ ಅನುಮೋದನೆಯನ್ನು ಪುಟ ಸಂಖ್ಯೆ 24 ಕ್ರ.ಸಂ 15 ರಲ್ಲಿ ಆಡಳಿತಾತ್ಮಕ ಅನುಮೋದನೆ ಟಿಪ್ಪಣಿ ನೀಡಲಾಗಿದೆ.

ಷರತ್ತುಗಳು:

1. ರಸ್ತೆ ಇತಿಹಾಸ ಪುಸ್ತಕದಲ್ಲಿ (Road History book/Register) ಈ ಕೆಲಸದ ವಿವರಗಳನ್ನು ದಾಖಲಿಸಿ ಕ್ರಮಬದ್ದಗೊಳಿಸುವುದು.
2. ಧರಪಟ್ಟಿ ಆಧಾರಿತವಲ್ಲದ ಅಂಶಗಳಿಗೆ ಡೆಟಾ ಧರವನ್ನು ತಯಾರಿಸಿ ಅನುಮೋದನೆ ಪಡೆಯುವುದು.
3. ಅಂದಾಜು ಪಟ್ಟಿಯಲ್ಲಿ ಮಾರುಕಟ್ಟೆ ದರ ಅಳವಡಿಸಿಕೊಂಡಿರುವ ಅಂಶಗಳಿಗೆ ಕೊಟೇಷನ್ ಕರೆದು ಅನುಮೋದನೆ ಪಡೆಯುವುದು.
4. ಆರ್.ಸಿ.ಸಿ ಡೆಕ್‌ಸ್ಲಾಬ್, ಹರಿನೀರು ಮೋರಿಯ ಆಸರೆಗೋಡೆ ಮತ್ತು ಸೇತುವೆ ಕೆಲಸಗಳ ನಿರ್ವಹಣೆಗೆ ಮೊದಲು ವಿನ್ಯಾಸಕ್ಕೆ ಅನುಮೋದನೆ ಪಡೆಯುವುದು.
5. ಮೇಲಿನ ಕೆಲಸದ ವೆಚ್ಚವನ್ನು ಉಪ ಅನುದಾನದಡಿಯಲ್ಲಿ ಭರಿಸುವುದು.
6. ಬಿ.ಎಂ./ಬಿ.ಸಿ. ಅಳವಡಿಸಿಕೊಂಡಿರುವ ರಸ್ತೆಗಳಿಗೆ ನಿಯಮಾನುಸಾರ ಪರೀಕ್ಷೆಗಳನ್ನು ಕೈಗೊಂಡು ಫಲಿತಾಂಶದ ವರದಿಗಳನ್ನು ಪಡೆದುಕೊಳ್ಳುವುದು.

ಕಾರ್ಯಪಾಲಕ ಅಭಿಯಂತರರು,
ಯಲಹಂಕ ವಿಭಾಗ
ಬಿ.ಬಿ.ಎಂ.ಪಿ ಬೆಂಗಳೂರು-64

ಪ್ರತಿಯನ್ನು:

1. ಮುಖ್ಯ ಅಭಿಯಂತರರು, ಯಲಹಂಕ ವಲಯ, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆರವರ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಲೆಕ್ಕಾಧಿಕಾರಿಗಳು, ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ ರವರ ಮಾಹಿತಿಗಾಗಿ ಕಳುಹಿಸಿದೆ.
3. ಕಛೇರಿ ಕಡತಕ್ಕೆ.